ಕರ್ನಾಟಕ ವಿಧಾನ ಸಭೆ
KARNATAKA LEGISLATIVE ASSEMBLY

ಸೋಮವಾರ ೪ನೇ ಜನವರಿ ೧೯೯೩, ಪುಷ್ಯ ೧೪, ಶಕ ೧೯೧೪

ಸದನವು ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ ೧೧.೦೫ ಗಂಟೆಗೆ ಸಮಾವೇಶಗೊಂಡಿತು.

ಉಪಾಧ್ಯಕ್ಷರು: (**ಶ್ರೀಮತಿ ನಾಗಮ್ಮ ಕೇಶವಮೂರ್ತಿ**) ಅವರು ಪೀಠವನ್ನು

ಅಲಂಕರಿಸಿದರು.

ಶ್ರೀ ಪಿ.ಸಿ. ಸಿದ್ದನಗೌಡರ್ : ಸನ್ಮಾನ್ಯ ಉಪಾಧ್ಯಕ್ಷರಿಗೆ ಹೊಸ ವರ್ಷದ ಶುಭಾಶಯಗಳು.

ಶ್ರೀ ವಾಟಾಳ್ ನಾಗರಾಜ್ : ಸನ್ಮಾನ್ಯ ಉಪಾಧ್ಯಕ್ಷರಿಗೆ, ಸ್ನೇಹಿತರಿಗೆ, ಸದಸ್ಯರಿಗೆ ಹೊಸ ವರ್ಷದ ಶುಭಾಶಯಗಳು.

ಉಪಾಧ್ಯಕ್ಷರು : ನಿಮಗೆಲ್ಲರಿಗೂ ಹೊಸ ವರ್ಷದ ಶುಭಾಶಯಗಳು.

ಶ್ರೀ ಆರ್.ವಿ. ದೇಶಪಾಂಡೆ : ತಮಗೆ ಹೊಸ ವರ್ಷದ ಶುಭಾಶಯಗಳನ್ನರ್ಪಿಸುತ್ತೇನೆ.

ಉಪಾಧ್ಯಕ್ಷರು : ವಂದನೆಗಳು.

ಸಂತಾಪ ಸೂಚನೆ

ಉಪಾಧ್ಯಕ್ಷರು : ಪ್ರಜಾಪ್ರತಿನಿಧಿ ಸಭೆಯ ಸದಸ್ಯರೂ ಹಾಗೂ ವಿದಾನ ಸಭೆಯ ಮಾಜಿ ಸದಸ್ಯರೂ ಆಗಿದ್ದ ಶ್ರೀ ಬಿ. ನಾರಾಯಣಸ್ವಾಮಪ್ಪನವರು ದಿನಾಂಕ : 30-12-92ರಂದು ನಿಧನರಾದರು.

ವೃತ್ತಿಯಲ್ಲಿ ಕೃಷಿಕರಾಗಿದ್ದ ಶ್ರೀಯುತರು, 1941 ರಿಂದ 1945 ಹಾಗೂ 1945 ರಿಂದ 1949ರ ಅವಧಿಯಲ್ಲಿ ಪ್ರಜಾಪ್ರತಿನಿಧಿ ಸಭೆಯ ಸದಸ್ಯರಾಗಿ, 1967-71ರ ಅವಧಿಯಲ್ಲಿ ನಾಲ್ಕನೇ ವಿಧಾನಸಭೆಯ ಸದಸ್ಯರಾಗಿ, ಯಲಹಂಕ ಕ್ಷೇತ್ರವನ್ನು ಪ್ರತಿನಿಧಿಸಿ, ಸೇವೆ ಸಲ್ಲಿಸುವುದರ ಜೊತೆಗೆ, ಬೆಂಗಳೂರು ಜಿಲ್ಲಾಮಂಡಳಿ, ತಾಲ್ಲೂಕು ಅಭಿವೃದ್ಧಿ ಮಂಡಳಿಯು ಸದಸ್ಯರಾಗಿ ಹಾಗೂ ಗ್ರಾಮೀಣ ಕೈಗಾರಿಕಾ ಸಂಘದ ಅಧ್ಯಕ್ಷರಾಗಿ, ಸಮಾಜದ ಸರ್ವತೋಮುಖ ಅಭಿವೃದ್ಧಿಗಾಗಿ ಸೇವೆ ಸಲ್ಲಿಸಿದ ಕೀರ್ತಿ ಶ್ರೀಯುತರದ್ದಾಗಿರುತ್ತದೆ.

ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಒಂದು ನಿಮಿಷ ಎದ್ದು ನಿಂತು ಮೌನವನ್ನಾಚಿಸಬೇಕೆಂದು ಕೇಳಿಕೊಳ್ಳುತ್ತೇನೆ.

(ಮೃತರ ಆತ್ಮಕ್ಕೆ ಚಿರಶಾಂತಿ ಸಿಗಲೆಂದು ಹಾಗೂ ಅವರ ಗೌರವಾರ್ಥ ಮಾನ್ಯ ಸದಸ್ಯರೆಲ್ಲರೂ ಒಂದು ನಿಮಿಷ ಎದ್ದು ನಿಂತು ಮೌನನನ್ನಾಚರಿಸಿದರು)